KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 30/10/2019

**ಚುನಾವಣೆ ತಯಾರಿ** ಉಪ ಚುನಾವಣೆಗೂ ಮುನ್ನ ಪ್ರವಾಸ ನಡೆಸಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ | ನೀತಿ ಸಂಹಿತೆ ಜಾರಿಗೂ ಮುನ್ನ ಭೇಟಿಗೆ ಸಿದ್ಧತೆ

# ಅನರ್ಹರ ಕ್ಷೇತ್ರದಲ್ಲಿ ಶೀಘ್ರ ಬಿಎಸ್‌ವೈ ಪರೋಕ್ಷ ಪ್ರಚಾರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 30/10/19

ಮುಂಬರುವ 15 ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಹಿನ್ನೆಲೆಯಲ್ಲಿ ನೀತಿ ಸಂಹಿತೆ ಜಾರಿ ಆಗುವುದರೊಳಗಾಗಿ ಒಂದು ಸುತ್ತು ಪ್ರವಾಸ ಕೈಗೊಳ್ಳುವ ಮೂಲಕ ಪರೋಕ್ಷವಾಗಿ ಚುನಾವಣಾ ಪ್ರಚಾರಕ್ಕೆ ಚಾಲನೆ ನೀಡಲು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಿದ್ಧತೆ ಆರಂಭಿಸಿದ್ದಾರೆ.

ಬರುವ ನವೆಂಬರ್ 11ರಂದ ಉಪಚುನಾವಣೆ ನೀತಿ ಸಂಹಿತೆ ಜಾರಿಯಾಗಲಿದ್ದು, ಅಷ್ಟರೊಳಗಾಗಿ ಸಾಧ್ಯವಾದಷ್ಟು ಹೆಚ್ಚಿನ ಕ್ಷೇತ್ರಗಳಿಗೆ ಭೇಟಿ ನೀಡಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುವ ಮೂಲಕ ಅನರ್ಹ ಶಾಸಕರಿಗೆ ಬಲ ನೀಡಲು ಮುಂದಾಗಿದ್ದಾರೆ.

ಈಗಾಗಲೇ ಕಳೆದ ವಾರ ಮುಖ್ಯಮಂತ್ರಿಗಳು ಅನರ್ಹ ಶಾಸಕ ಎಂ.ಟಿ.ಬಿ.ನಾಗರಾಜ್ ಅವರ ಹೊಸಕೋಟೆ ಕ್ಷೇತ್ರಕ್ಕೆ ತೆರಳಿ ಕೆರೆ ತುಂಬಿಸುವ ಯೋಜನೆ ಸೇರಿದಂತೆ ಹಲವಾರು ಕಾರ್ಯಕ್ರಮಗಳಿಗೆ ಚಾಲನೆ ಕೊಟ್ಟಿದ್ದರು. ಅದರಂತೆ ಇನ್ನುಳಿದ ಹಲವು ಕ್ಷೇತ್ರಗಳಿಗೂ ಭೇಟಿ ನೀಡುವ ರೂಪುರೇಷೆ ಸಿದ್ಧವಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.



ಉಪ ಚುನಾವಣೆ ನಡೆಯಲಿರುವ ಕ್ಷೇತ್ರಗಳಲ್ಲಿ ನ.11 ರಂದು ನೀತಿ ಸಂಹಿತೆ ಜಾರಿಯಾಗಲಿದೆ. ಅದಕ್ಕೂ ಮೊದಲೇ ಅಲ್ಲಿಗೆ ಭೇಟಿ ನೀಡಲು ಯಡಿಯೂರಪ್ಪ ಮುಂದಾಗಿದ್ದಾರೆ.

ರಾಜಧಾನಿ ಬೆಂಗಳೂರಿನಲ್ಲಿರುವ ನಾಲ್ಕು ಕ್ಷೇತ್ರಗಳಿಗೂ ಚುನಾವಣೆ ನಡೆಯಲಿದೆ. ಇವು ನಗರ ವ್ಯಾಪ್ತಿಯಲ್ಲಿರುವುದರಿಂದ ಇಲ್ಲಿಯ ಚುನಾವಣೆ ಬಗ್ಗೆ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗಾಗಲಿ ಅಥವಾ ಆಡಳಿತಾರೂಢ ಬಿಜೆಪಿಗಾಗಲಿ ಅಷ್ಟೊಂದು ಆತಂಕವಿಲ್ಲ. ಆದರೆ, ನಗರ ವ್ಯಾಪ್ತಿಯಿಂದ ಹೊರಗಿರುವ ಕ್ಷೇತ್ರಗಳಲ್ಲಿ ಎಲ್ಲಿಯಾದರೂ ಹೆಚ್ಚು ಕಡಿಮೆಯಾದರೆ ಏನು ಗತಿ ಎಂಬ ಸಣ್ಣದೊಂದು ಆತಂಕವಿದೆ. ಹೀಗಾಗಿಯೇ ಖುದ್ದು ಮುಖ್ಯಮಂತ್ರಿ ಯಡಿಯೂರಪ್ಪ ಅವರೇ ನೇತೃತ್ವ ವಹಿಸಿಕೊಂಡು ಚುನಾವಣಾ ಪ್ರಚಾರದ ಅಖಾಡಕ್ಕೆ ಇಳಿಯಲು ನಿರ್ಧರಿಸಿದ್ದಾರೆ ಎನ್ನಲಾಗಿದೆ.

ಇದೇ ವೇಳೆ ಉತ್ತರ ಕರ್ನಾಟಕದಲ್ಲಿ ಪ್ರವಾಹ ಪರಿಸ್ಥಿತಿ ಮುಂದುವರೆದಿರುವುದರಿಂದ ಆ ಭಾಗದಲ್ಲಿ ಪರಿಹಾರ ಕಾರ್ಯಗಳನ್ನು ಸಮರ್ಪಕವಾಗಿ ನಡೆಸದಿದ್ದರೆ ಅದು ಆ ಭಾಗದ ಕೆಲವು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಮೇಲೆ ನಕಾರಾತ್ಮಕ ಪರಿಣಾಮ ಉಂಟು ಮಾಡಲಿದೆ ಎಂಬುದು ಯಡಿಯೂರಪ್ಪ ಅವರಿಗೆ ಮನವರಿಕೆಯಾಗಿದೆ. ಹೀಗಾಗಿಯೇ ಪ್ರವಾಹಪೀಡಿತ ಪ್ರದೇಶಗಳಲ್ಲಿನ ಪರಿಹಾರ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಸಚಿವರಿಗೆ ಹಾಗೂ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅಲ್ಲದೆ, ಈ ಸಂಬಂಧ ವಿಶೇಷವಾಗಿ ಆ ಭಾಗದ ಉಪಮುಖ್ಯಮಂತ್ರಿಗಳಾದ ಗೋವಿಂದ ಕಾರಜೋಳ ಮತ್ತು ಲಕ್ಷ್ಮಣ ಸವದಿ ಅವರಿಗೆ ಜವಾಬ್ದಾರಿಯನ್ನೂ ವಹಿಸಿದ್ದಾರೆ ಎಂದು ತಿಳಿದು ಬಂದಿದೆ.

ನವೆಂಬರ್ ಮೊದಲ ವಾರದಲ್ಲಿ ಹಾವೇರಿ ಜಿಲ್ಲೆ ಹಿರೇಕೆರೂರು ಕ್ಷೇತ್ರಕ್ಕೆ ತೆರಳಿ ಅಲ್ಲಿನ ಕೆರೆ ತುಂಬಿಸುವ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಅದೇ ರೀತಿ ಚಿಕ್ಕಬಳ್ಳಾಪುರಕ್ಕೆ ತೆರಳಿ ನೂತನ ವೈದ್ಯಕೀಯ ಕಾಲೇಜಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಜೊತೆಗೆ ಬಳ್ಳಾರಿ ಜಿಲ್ಲೆಯ ವಿಜಯನಗರ ಮತ್ತಿತರ ಕ್ಷೇತ್ರಗಳಿಗೆ ತೆರಳಿ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಯಡಿಯೂರಪ್ಪ ಚಾಲನೆ ನೀಡಲಿದ್ದಾರೆ. ಈ ಕುರಿತು ದಿನಾಂಕ ನಿಗದಿಪಡಿಸಲಾಗುತ್ತಿದೆ ಎಂದು ಮುಖ್ಯಮಂತ್ರಿಗಳ ಕಚೇರಿ ಮೂಲಗಳು ಮಾಹಿತಿ ನೀಡಿವೆ.

## 15 ಕ್ಷೇತ್ರಗಳಿಗೆ ಸಚಿವರಿಗೆ ಉಸ್ತುವಾರಿ

ಈ ನಡುವೆ 15 ವಿಧಾನಸಭಾ ಕ್ಷೇತ್ರಗಳಿಗೆ ಒಬ್ಬೊಬ್ಬ ಸಚಿವರನ್ನು ಉಸ್ತುವಾರಿಯನ್ನಾಗಿ ನೇಮಿಸಲು ಯಡಿಯೂರಪ್ಪ ನಿರ್ಧರಿಸಿದ್ದಾರೆ. ಈ ಹಿಂದೆ ಮೊದಲ ಬಾರಿಗೆ ಉಪಚುನಾವಣೆ ನಿಗದಿಯಾಗಿದ್ದಾಗಲೇ ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೂ ಸಚಿವರನ್ನು ಉಸ್ತುವಾರಿಯನ್ನಾಗಿ ನೇಮಿಸಲಾಗಿತ್ತು. ಆದರೆ, ನಂತರ ಉಪಚುನಾವಣೆ ಮುಂದೂಡಿದ್ದರಿಂದ ಅದು ಕಾರ್ಯಗತಗೊಂಡಿರಲಿಲ್ಲ. ಇದೀಗ ಮತ್ತೊಮ್ಮೆ ಹೊಸದಾಗಿ ಸಚಿವರನ್ನು ನೇಮಿಸುವರೋ ಅಥವಾ ಹಿಂದೆ ನೇಮಿಸಿದ್ದವರಿಗೇ ಜವಾಬ್ದಾರಿ ವಹಿಸಿ ಸೂಚನೆ ನೀಡುತ್ತಾರೊ ಎಂಬುದನ್ನು ಕಾದು ನೋಡಬೇಕು.